ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

# ಪತ್ರಿಕಾ ತುಣುಕುಗಳು
# PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೃಷಿ ಕಾಯ್ದೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯ ವಾಣಿ   ದಿನಾಂಕ : DATE 22/9/2020

## 'ಕೃಷಿ ಕಾಯ್ದೆ ತಿದ್ದುಪಡಿ, ರೈತರ ಮರಣ ಶಾಸನ'

ಬೆಂಗಳೂರು: ಸಂಸತ್ ನಲ್ಲಿ ವಿರೋಧ ಪಕ್ಷಗಳ ಅಭಿವ್ಯಕ್ತಿ ಸ್ವಾತಂತ್ರ್ಯದ ಕೊರಳನ್ನು ಹಿಚುಕಿ, ರೈತರ ಪಾಲಿಗೆ ಮರಣ ಶಾಸನವಾಗಿರುವ ಕೃಷಿ ಉತ್ಪನ್ನ ಮಾರಾಟ ಮತ್ತು ವಾಣಿಜ್ಯ (ಉತ್ತೇಜನ ಮತ್ತು ಸೌಲಭ್ಯ) ಮಸೂದೆಗೆ ಬಲಾತ್ಕಾರದಿಂದ ಅಂಗೀಕಾರ ಪಡೆಯುವ ಮೂಲಕ ಬಿಜೆಪಿ ಸರ್ಕಾರ ಸಂಸದೀಯ ಪ್ರಜಾಪ್ರಭುತ್ವದ ಕಗ್ಗೊಲೆ ನಡೆಸಿದೆ ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿ, ಕೊರೊನಾ ನಿಯಂತ್ರಿಸಲಾಗದೆ ಮಂಡಿ ಊರಿ ದೇಶದ ಜನರನ್ನು ಸಾವು, ನೋವಿನ ದವಡೆಗೆ ನೂಕುತ್ತಿರುವ ಅಸಮರ್ಥ ಸರ್ಕಾರ, ಈ ಅವಕಾಶವನ್ನು ದುರ್ಬಳಕೆ ಮಾಡಿಕೊಂಡು ಕೊರೊನೋತ್ತರ ಭಾರತದ ಏಕೈಕ ಆಶಾಕಿರಣವಾದ ಕೃಷಿ ಕ್ಷೇತ್ರವನ್ನು ಸರ್ವನಾಶ ಮಾಡಲು ಹೊರಟಿರುವುದು ದುರಂತ ಎಂದಿದ್ದಾರೆ.

ಕೃಷಿಕ್ಷೇತ್ರಕ್ಕೆ ಸಂಬಂಧಿಸಿದ ಮೂರು ಪ್ರಮುಖ ಮಸೂದೆಗಳ ಬಗ್ಗೆ ಉಭಯ ಸದನಗಳಲ್ಲಿ ವಿಸ್ತೃತ ಚರ್ಚೆಗೆ ಅವಕಾಶ ನೀಡಬೇಕು ಮತ್ತು ಮಸೂದೆಗಳನ್ನು ಆಯ್ಕೆ ಸಮಿತಿಯ ಪರಿಶೀಲನೆಗೊಳಪಡಿಸಬೇಕು ಎಂಬ ವಿರೋಧಪಕ್ಷಗಳ ಬೇಡಿಕೆಯನ್ನು ಈಡೇರಿಸಲು ಕೇಂದ್ರ ಸರ್ಕಾರ ಹಿಂದೇಟು ಹಾಕುತ್ತಿರುವುದು ಯಾಕೆ ಎಂದು ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.